ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಉನಿ : ಸುಮಪ : 2014–15 : ಆಗಸ್ಟ್ 3, 2014

ಪತ್ರಿಕಾ ಪ್ರಕಟಣೆ

## *ಮಾಜಿ ಸಚಿವ ಜಿ. ಹೆಚ್. ಅಶ್ವಥ್ ರೆಡ್ಡಿ* ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

ಬೆಂಗಳೂರು, ಆಗಸ್ಟ್ 3 ( ಕರ್ನಾಟಕ ವಾರ್ತೆ) :

ಮಾಜಿ ಸಚಿವ ಹಾಗೂ ಮಾಜಿ ಶಾಸಕ ಶ್ರೀ ಜಿ. ಹೆಚ್. ಅಶ್ವಥ್ ರೆಡ್ಡಿ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ವ್ಯಾಪಾರಸ್ಥ ಕುಟುಂಬದಲ್ಲಿ ಜನಿಸಿದರೂ ಪ್ರಾಧ್ಯಾಪಕರಾಗಿ ವೃತ್ತಿ ಜೀವನ ಪ್ರಾರಂಭಿಸಿದ್ದ ಶ್ರೀ ಅಶ್ವಥ್ ರೆಡ್ಡಿ ಅವರು ರಾಜಕಾರಣಕ್ಕೆ ಧುಮುಕಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು. ಚಿತ್ರದುರ್ಗ ಜಿಲ್ಲೆಯ. ಜಗಳೂರು ಕ್ಷೇತ್ರದಲ್ಲಿ ಗೆಲುವಿನ ಮೇಲೆ ಗೆಲುವು ಸಾಧಿಸಿ ಕ್ಷೇತ್ರದ ಜನತೆಯ ಪ್ರೀತಿಗೆ ಪಾತ್ರಾಗಿದ್ದರು. ಇಂಧನ ಹಾಗೂ ಲೋಕೋಪಯೋಗಿ ಖಾತೆಯನ್ನು ಸಮರ್ಥವಾಗಿ ನಿಭಾಯಿಸಿ ಉತ್ತಮ ಹೆಸರು ಗಳಿಸಿದ್ದರು. ಕ್ಷುಲ್ಲಕ ವಿಷಯಗಳ ಬಗ್ಗೆ ಎಂದೂ ಪ್ರತಿಕ್ರಿಯಿಸದೆ ಮೌನ ವಹಿಸುತ್ತಿದ್ದುದು ಶ್ರೀ ಅಶ್ವಥ್ ರೆಡ್ಡಿ ಅವರ ವಿಶೇಷತೆಯಾಗಿತ್ತು ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಶ್ರೀ ಅಶ್ವಥ್ ರೆಡ್ಡಿ ಅವರ ಆತ್ಮಕ್ಕೆ ಶಾಂತಿ ಲಭಿಸಲಿ ಹಾಗೂ ಶ್ರೀ ಅಶ್ವಥ್ ರೆಡ್ಡಿ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

********

ಡಿ ಪಿ ಎಂ